ಕರ್ನಾಟಕ ಸರ್ಕಾರ
ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ:ಕಾಶಿಇ:ಆಯವ್ಯಯ:ಸುತ್ತೋಲೆ:ಸಪ್ರದಕಾ:06:2021-22

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಬೆಂಗಳೂರು, ದಿನಾಂಕ: 19.04.2021

## ಸುತ್ತೋಲೆ

ವಿಷಯ: 2021-22ನೇ ಸಾಲಿನಲ್ಲಿ ಮೊದಲನೇ ಕಂತಿನ ಅನುದಾನದಲ್ಲಿ ಅವಶ್ಯವಿರುವ ವೇತನ ಅನುದಾನವನ್ನು ಬಿಡುಗಡೆ ಮಾಡುವ ಬಗ್ಗೆ.

ಉಲ್ಲೇಖ: ಸರ್ಕಾರದ ಆದೇಶ ಸಂಖ್ಯೆ:ಇಡಿ:65:ಹೆಚ್.ಪಿ.ಸಿ:ಬೆಂಗಳೂರು-21,ದಿನಾಂಕ:17.04.2021.

****

ಸೂಚಿತ ವಿಷಯ ಮತ್ತು ಉಲ್ಲೇಖಕ್ಕೆ ಸಂಬಂಧಿಸಿದಂತೆ ಸರ್ಕಾರದ ಆದೇಶದಲ್ಲಿ 2021-22ನೇ ಸಾಲಿನ ಮೊದಲನೇ ತ್ರೈಮಾಸಿಕ ವೇತನಕ್ಕಾಗಿ ಅನುದಾನ ಬಿಡುಗಡೆಯಾಗಿರುವುದರಿಂದ, ಇಲಾಖಾ ವ್ಯಾಪ್ತಿಗೆ ಒಳಪಡುವ ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರ ಕಛೇರಿ/ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಿಂದ ಸ್ವೀಕೃತವಾಗಿರುವ ಬೇಡಿಕೆಯಂತೆ ಮೊದಲ ತ್ರೈಮಾಸಿಕ ಅವದಿಯ ವೇತನಕ್ಕಾಗಿ (ಮಾರ್ಚ, ಏಪ್ರಿಲ್ ಮತ್ತು ಮೇ 2021) ಅನುದಾನ ಬಿಡುಗಡೆ ಮಾಡುತ್ತಿದ್ದು, ಸದರಿ ಅನುದಾನದಲ್ಲಿ 2021-22ನೇ ಸಾಲಿನ ಮಾರ್ಚ, ಏಪ್ರಿಲ್ ಮತ್ತು ಮೇ 2021 ರ ವೇತನ ಹೊರತುಪಡಿಸಿ ಯಾವುದೇ ವೇತನ ಬಾಕಿ ಮತ್ತು ಇತರೆ ಬಾಕಿ ಬಿಲ್ಲುಗಳನ್ನು ಕ್ಲೇಮು ಮಾಡದಂತೆ ಕಟ್ಟುನಿಟ್ಟಾಗಿ ಸೂಚಿಸಲಾಗಿದೆ.

ವೇತನ ಬಾಕಿ ಹಾಗೂ ಇತರೆ ಬಾಕಿಗಳಿಗೆ ಸಂಬಂಧಿಸಿದಂತೆ ಅವಶ್ಯವಿರುವ ಅನುದಾನದ ವಿವರಗಳನ್ನು ಈ ಕಛೇರಿಯಿಂದ ಸೂಚಿಸಿದ ನಂತರ ಲೆಕ್ಕ ಶೀರ್ಷಿಕೆವಾರು ಮಾಹಿತಿಯನ್ನು ಸಲ್ಲಿಸುವಂತೆ ಸೂಚಿಸಲಾಗಿದೆ. ಹಾಗೂ 2021-22ನೇ ಸಾಲಿನ ಮಾರ್ಚ, ಏಪ್ರಿಲ್ ಮತ್ತು ಮೇ 2021 ರ ವೇತನ ಹೊರತುಪಡಿಸಿ ಹೆಚ್ಚುವರಿ ಕ್ಲೇಮು ಮಾಡಿ ವೇತನಕ್ಕೆ ಕೊರತೆ ಉಂಟಾದಲ್ಲಿ ಸಂಬಂಧಪಟ್ಟ ಅಧಿಕಾರಿ/ಸಿಬ್ಬಂದಿಗಳ ವಿರುದ್ಧ ನಿಯಾಮಾನುಸಾರ ಶಿಸ್ತಿನ ಕ್ರಮ ಜರುಗಿಸಲಾಗುವುದು.

ನಿರ್ದೇಶಕರು
ಕಾಲೇಜು ಶಿಕ್ಷಣ ಇಲಾಖೆ

ಇವರಿಗೆ,

ಇಲಾಖಾ ವ್ಯಾಪ್ತಿಯ ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರು ಹಾಗೂ ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ

ಪ್ರತಿಯನ್ನು:

1. ಮಾಹಿತಿ ಅಧಿಕಾರಿಗಳು, ಮಾಹಿತಿ & ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ ಬೆಂಗಳೂರು- ಸದರಿ ಸುತ್ತೋಲೆಯನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಅಳವಡಿಸಲು ಸೂಕ್ತ ಕ್ರಮಕ್ಕಾಗಿ
2. ಕಛೇರಿ ಪ್ರತಿ.